## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1539 |
| ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11-03-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿಯವರಿಗೆ ನೀಡುತ್ತಿರುವ ಮೂಲಸೌಕರ್ಯಗಳನ್ನು ನಗರ ಪ್ರದೇಶದ ಪರಿಶಿಷ್ಟ ಜಾತಿಯವರಿಗೆ ನೀಡಲು ಸರ್ಕಾರಕ್ಕೆ ಇರುವ ಸಮಸ್ಯೆಗಳು ಯಾವುವು; | ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಎಸ್‌ಎಲ್‌ಪಿ 2011, ದಿನಾಂಕ: 26-05-2011ರಲ್ಲಿ ಗ್ರಾಮೀಣ ಪ್ರದೇಶದ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮಾರ್ಗಸೂಚಿಗಳನ್ನು ರಚಿಸಲಾಗಿರುತ್ತದೆ. ಸದರಿ ಮಾರ್ಗಸೂಚಿಗಳನ್ವಯ ಗ್ರಾಮೀಣ ಪ್ರದೇಶಗಳಲ್ಲಿನ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮಾತ್ರ ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ) | ಇದರಿಂದ ನಗರ ಪ್ರದೇಶದ ಪರಿಶಿಷ್ಟ ಜಾತಿ ಜನಾಂಗದವರು ಮೂಲಸೌಕರ್ಯಗಳಿಂದ ವಂಚಿತರಾಗುವುದಿಲ್ಲವೇ; | ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಸಕಇ 375 ಎಸ್‌ಡಿಸಿ 2018, ದಿನಾಂಕ:10-10-2018 ರನ್ವಯ ಪ್ರಗತಿ ಕಾಲೋನಿ ಯೋಜನೆಯಡಿ |
| ಇ) | 2012-13ನೇ ಸಾಲನ್ನು ಹೊರತುಪಡಿಸಿ ಇದುವರೆಗೂ ಪ್ರದೇಶದ ಪರಿಶಿಷ್ಟ ಜಾತಿಯ ಕಾಲೋನಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು? | ರಾಜ್ಯದ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮಾರ್ಗಸೂಚಿಗಳನ್ನು ರಚಿಸಲಾಗಿರುತ್ತದೆ. ಸದರಿ ಮಾರ್ಗಸೂಚಿಗಳಲ್ಲಿಯೂ ಸಹಾ ಗ್ರಾಮೀಣ ಪ್ರದೇಶಗಳಲ್ಲಿನ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮಾತ್ರ ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಸಕಇ 90 ಎಸ್‌ಎಲ್‌ಪಿ 2020, ದಿನಾಂಕ:29-06-2020ರಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಒದಗಿಸಲಾಗುತ್ತಿರುವ ಅನುದಾನದಿಂದ ಮತ್ತು ಆಯಾ ನಗರ ಸ್ಥಳೀಯ ಸಂಸ್ಥೆಗಳ ಶೇ.24.10%ರಡಿ ಲಭ್ಯವಿರುವ ಹಣದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಕೊಳಗೇರಿಗಳು ಹಾಗೂ ಕೊಳಗೇರಿಗಳಲ್ಲದ ಪ್ರದೇಶಗಳಿಗೂ ಸಹ ಮೂಲಭೂತ ಸೌಲಭ್ಯಗಳನ್ನು ಒದಗಿಸಲು 'ಪ್ರಗತಿ ಕಾಲೋನಿ ಯೋಜನೆ'ಯನ್ನು ನಗರ ಪ್ರದೇಶಗಳಿಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ. |

ಸಕಇ 231 ಎಸ್‌ಎಲ್‌ಪಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು